## ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್. ರವಿ ಇವರು ನಿಯಮ 330ರಡಿ ಪ್ರಸ್ತಾಪಿಸಿರುವ **"ರಾಮನಗರ ಜಿಲ್ಲಾ ಆಸ್ಪತ್ರೆಗೆ ಜಿಲ್ಲೆಯ ನಾನಾ ಭಾಗಗಳಿಂದ ಪ್ರತಿದಿನ ನೂರಾರು ಬಡ ರೋಗಿಗಳು ಚಿಕಿತ್ಸೆಗಾಗಿ ಆಗಮಿಸುತ್ತಿದ್ದು, ಇಲ್ಲಿ ವೈದ್ಯರು, ನರ್ಸ್‌ಗಳು, ಪ್ರಯೋಗಾಲಯ ತಂತ್ರಜ್ಞರು, ಇತರೆ ಸಿಬ್ಬಂದಿಗಳ ಕೊರತೆ ಇರುವುದರಿಂದ ಮತ್ತು ಈ ಆಸ್ಪತ್ರೆಯಲ್ಲಿ ತುರ್ತು ನಿಗಾ ಘಟಕಗಳ ಕೊರತೆ ಇರುವುದರಿಂದ ಮತ್ತು ಈ ಘಟಕಗಳಿಗೆ ಅಗತ್ಯವಿರುವ ಅಗತ್ಯ ಮೂಲಸೌಕರ್ಯ ಮತ್ತು ತಜ್ಞ ವೈದ್ಯರುಗಳ ಕೊರತೆ ಇರುವುದರಿಂದ ರೋಗಿಗಳಿಗೆ ಅಗತ್ಯವಿರುವ ಸೂಕ್ತ ಚಿಕಿತ್ಸೆ ಲಭ್ಯವಾಗುತ್ತಿಲ್ಲ. ಇದರಿಂದಾಗಿ ಸಾರ್ವಜನಿಕರು ಬಹುತೇಕ ಖಾಸಗಿ ಆಸ್ಪತ್ರೆಗಳನ್ನು ಅವಲಂಭಿಸುವಂತಾಗಿದ್ದು, ಜಿಲ್ಲಾ ಆಸ್ಪತ್ರೆಗಳಿಗೆ ಆಗಮಿಸುವ ರೋಗಿಗಳಿಗೆ ತ್ವರಿತವಾಗಿ ಅಗತ್ಯ ಚಿಕಿತ್ಸೆ ಲಭಿಸುವಂತಹ ಪರಿಸ್ಥಿತಿ ನಿರ್ಮಾಣ ಮಾಡುವ ಕುರಿತು."** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ.

*****

ನೂತನ ಜಿಲ್ಲಾ ಆಸ್ಪತ್ರೆ ಸಾರ್ವಜನಿಕರಿಗೆ ಬಳಕೆಯಾಗುತ್ತಿದ್ದು, ವೈದ್ಯಕೀಯ ಸೇವೆ ನೀಡಲಾಗುತ್ತಿದೆ. ಪ್ರಸ್ತುತ ಆಸ್ಪತ್ರೆಯಲ್ಲಿ ಮಂಜೂರು, ಕರ್ತವ್ಯ ನಿರತ ಮತ್ತು ಖಾಲಿ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

| ಹುದ್ದೆಗಳ ಪದನಾಮ | ಮಂಜೂರು | ಕರ್ತವ್ಯ ನಿರತ | ಖಾಲಿ |
|---|---|---|---|
| ತಜ್ಞ ವೈದರು | 26 | 20 | 06 |
| ಎಸ್.ಎಂ.ಓ | 06 | 0 | 06 |
| ಸಿ.ಎಂ.ಓ | 07 | 05 | 02 |
| ಶುಶ್ರೂಷಾಧಿಕಾರಿ | 66 | 17 | 49 |
| ಪ್ರಯೋಗಶಾಲಾ ತಂತ್ರಜ್ಞರು | 03 | 02 | 01 |
| ಗ್ರೂಪ್-ಡಿ ನೌಕರರು | 44 | 11 | 33 |

**ತಜ್ಞರು/ವೈದ್ಯರು, ನರ್ಸ್‌ಗಳು, ಪ್ರಯೋಗಾಲಯ ತಂತ್ರಜ್ಞರು, ಇತರೆ ಸಿಬ್ಬಂದಿಗಳ ಕೊರತೆ ನೀಗಿಸಲು ಈ ಕೆಳಕಂಡ ಕ್ರಮವನ್ನು ವಹಿಸಲಾಗುತ್ತಿದೆ.**

- ಎನ್.ಹೆಚ್.ಎಂ ಯೋಜನೆ ಅಡಿಯಲ್ಲಿ 07 ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.
- ಕಡ್ಡಾಯ ಗ್ರಾಮೀಣ ಸೇವೆಯ ಮೇಲೆ ಒಬ್ಬ (1) ಎಂ.ಬಿ.ಬಿ.ಎಸ್ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.
- ಎನ್.ಹೆಚ್.ಎಂ ಯೋಜನೆ ಅಡಿಯಲ್ಲಿ ಒಟ್ಟು 45 ಶುಶ್ರೂಷಾಧಿಕಾರಿಗಳ ಹುದ್ದೆ ಮಂಜೂರಾಗಿದ್ದು, ಪ್ರಸ್ತುತ 37 ಹುದ್ದೆಗಳು ಕರ್ತವ್ಯ ನಿರ್ವಹಿಸುತ್ತಿದ್ದು, 08 ಹುದ್ದೆಗಳು ಖಾಲಿ ಇರುತ್ತವೆ.
- ಪ್ರಯೋಗಶಾಲಾ ತಂತ್ರಜ್ಞರು ಎನ್.ಹೆಚ್.ಎಂ ಯೋಜನೆ ಅಡಿಯಲ್ಲಿ 01, ಹೊರಗುತ್ತಿಗೆ ಮೇಲೆ 03 ಜನ ಕರ್ತವ್ಯ ನಿರ್ವಹಿಸುತ್ತಿದ್ದಾರೆ.
- ಗ್ರೂಪ್-ಡಿ ನೌಕರರ ಖಾಲಿ ಹುದ್ದೆಗೆ ಅನುಗುಣವಾಗಿ ಶೇ.45 ರಷ್ಟು ಗ್ರೂಪ್-ಡಿ ನೌಕರರನ್ನು, ಶೇ. 30 ರಷ್ಟು ನಾನ್‌ಕ್ಲಿನಿಕಲ್ ಸಿಬ್ಬಂದಿಯನ್ನು ಹೊರಗುತ್ತಿಗೆ ಮೇಲೆ ಪಡೆಯಲಾಗಿರುತ್ತದೆ.

**ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುತ್ತಿದೆ:-**

1 ಸರ್ಕಾರದ ಪತ್ರ ಸಂಖ್ಯೆ: ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ: 13.12.2022 ರಲ್ಲಿ ರಾಜ್ಯದ ಬೆಂಗಳೂರುನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ಹೊರತುಪಡಿಸಿ ಇತರ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾ.ಆ.ಕೇಂದ್ರ ಮತ್ತು ಸ.ಆ.ಕೇಂದ್ರಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಆದೇಶಗಳಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಾಮಾನುಸಾರ ಭರ್ತಿಮಾಡಲು ಅನುಮತಿ ನೀಡಿದೆ.

--2

Scanned with OKEN Scanner

2 ಸರ್ಕಾರದ ಆದೇಶ ಸಂಖ್ಯೆ: ಆಕುಕ 619 ಹೆಚ್‌ಎಸ್‌ಹೆಚ್ 2022, ದಿ:17.01.2024 ರಲ್ಲಿ ಆಕುಕ ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರನ್ನು ಮತ್ತು 250 ಸಾ.ಕ.ವೈದ್ಯಾಧಿಕಾರಿಗಳನ್ನು ಕೆಲವು ಷರತ್ತುಗಳಿಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ಭರ್ತಿಮಾಡಲು ಅನುಮತಿ ನೀಡಲಾಗಿದೆ.

3 ಇಲಾಖೆಯ ಮುಖಾಂತರ ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ತಜ್ಞ ವೈದ್ಯರನ್ನು ತಜ್ಞತೆ ಹುದ್ದೆಗೆ ನೇಮಿಸಲಾಗುತ್ತಿದೆ.

4 ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ 1 ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ /ತಜ್ಞ ವೈದ್ಯ ಅಭ್ಯರ್ಥಿಗಳನ್ನು ನೇಮಕ ಮಾಡುವ ಮೂಲಕ ವೈದ್ಯರ/ ತಜ್ಞರುಗಳ ಕೊರತೆಯನ್ನು ನೀಗಿಸಲು ಕ್ರಮಕೈಗೊಳ್ಳಲಾಗುತ್ತಿದೆ.

5 ಪ್ರಸ್ತುತ ಆರೋಗ್ಯ ಇಲಾಖೆಯಲ್ಲಿ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಎಫ್‌ಡಬ್ಲ್ಯು 709 ಹೆಚ್‌ಎಸ್‌ಎಂ 2017, ದಿನಾಂಕ:17.05.2022ರಲ್ಲಿ ಅನುಮೋದಿಸಿದ್ದು, ಅದರನ್ವಯ ವಿಶೇಷ ನೇಮಕಾತಿ ಸಮಿತಿಯ ಅಧಿಸೂಚನೆ ಸಂಖ್ಯೆ: ಎಸ್‌ಆರ್.ಸಿ./ಆರ್.ಪಿ.ಸಿ./15/2022-23, 02.09.2022ರಲ್ಲಿ ಈ ಕೆಳಕಂಡ ಹುದ್ದೆಗಳನ್ನು ಭರ್ತಿಮಾಡಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಆಯ್ಕೆ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ.

| ಕ್ರ. ಸಂ | ಹುದ್ದೆ ಪದನಾಮ | ಅಧಿಸೂಚಿಸಿದ ಹುದ್ದೆಗಳ ಸಂಖ್ಯೆ |
|---|---|---|
| 1. | ಫಾರ್ಮಸಿ ಅಧಿಕಾರಿ | 400 |
| 2. | ಕಿರಿಯ ವೈದ್ಯಕೀಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ | 150 |
| 3. | ವಿಕಿರಣ ಶಾಸ್ತ್ರ ಚಿತ್ರಣ ಅಧಿಕಾರಿ | 08 |
| | **ಒಟ್ಟು** | **558** |

6. ಸರ್ಕಾರದ ಪತ್ರ ಸಂಖ್ಯೆ:ಆಕುಕ 103 ಹೆಚ್.ಎಸ್.ಎಂ. 2019, ದಿನಾಂಕ:03.02.2024ರನ್ವಯ ಖಾಲಿ ಇರುವ ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ-200 ಹಾಗೂ ಫಾರ್ಮಸಿ ಅಧಿಕಾರಿ-400 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಹುದ್ದೆಗಳನ್ನು ಭರ್ತಿ ಮಾಡುವವರೆಗೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಜಿಲ್ಲಾ ಆಸ್ಪತ್ರೆ, ರಾಮನಗರ ಇಲ್ಲಿ 30 ಹಾಸಿಗೆಗಳ ತುರ್ತು ನಿಗಾ ಘಟಕ (ICU) ಲಭ್ಯವಿದ್ದು, ಈ ಕೆಳಕಂಡ ಅಗತ್ಯ ಮೂಲಭೂತ ಸೌಲಭ್ಯಗಳು ಲಭ್ಯವಿರುತ್ತವೆ.

Oxygen supply, Ventilators, Multipara Monitors, ECG Machine, Defibrilators, Suction, Laryngoscopes, Syringe Pumps, Infusion Pumps,CPAPS, BIPAPS, HFNC.

ತುರ್ತು ಚಿಕಿತ್ಸಾ ಘಟಕದಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಮಂಜೂರಾದ 6 ಶುಶ್ರೂಷಕರ ಹುದ್ದೆಯಲ್ಲಿ ಪ್ರಸ್ತುತ 4 ಶುಶ್ರೂಷಕರು ಹಾಗೂ ಮಂಜೂರಾದ 3 ವೈದ್ಯಾಧಿಕಾರಿಗಳ ಹುದ್ದೆಯಲ್ಲಿ 3 ವೈದ್ಯರು ಕಾರ್ಯನಿರ್ವಹಿಸುತ್ತಿದ್ದಾರೆ. ಮುಂದುವರೆದು ಹೆಚ್ಚುವರಿ ತಜ್ಞ ವೈದ್ಯರು ಮತ್ತು ಶುಶ್ರೂಷಕರ ಹುದ್ದೆಗಳ ಮಂಜೂರಾತಿಗೆ ಸಂಬಂಧಿಸಿ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

**ಆಕುಕ 11 ಹೆಚ್.ಎಸ್.ಡಿ 2024**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

Scanned with OKEN Scanner